ELECTION URGENT

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ, ನಂ.8, ಕನ್ನಿಂಗ್ ಹ್ಯಾಂ ರಸ್ತೆ ಬೆಂಗಳೂರು-560052.

**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ 41 ಇಯುಬಿ 2021**

**ಬೆಂಗಳೂರು, ದಿನಾಂಕ:29-3-2021**

ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಪರಿಚ್ಛೇದ 243 ಜೆಡ್ಎ ಹಾಗೂ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ 1976 ರ ಪ್ರಕರಣ 55 ಮತ್ತು ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ (ಚುನಾವಣೆ) ನಿಯಮಗಳು, 1979ರ ನಿಯಮ 3(1) ರಲ್ಲಿ ಪ್ರದತ್ತವಾಗಿರುವ ಅಧಿಕಾರದ ಮೇರೆಗೆ ಬಳ್ಳಾರಿ ಮಹಾನಗರ ಪಾಲಿಕೆಯ 39 ವಾರ್ಡುಗಳಿಗೆ ಈ ಕೆಳಕಂಡ ಚುನಾವಣಾ ವೇಳಾಪಟ್ಟಿಯನುಸಾರ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ಆದೇಶಿಸಿದೆ.

| ಚುನಾವಣಾ ವೇಳಾ ಪಟ್ಟಿ | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 08-04-2021 (ಗುರುವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 15-04-2021 (ಗುರುವಾರ) |
| 3. | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 16-04-2021 (ಶುಕ್ರವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 19-04-2021 (ಸೋಮವಾರ) |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ) | 27-04-2021 (ಮಂಗಳವಾರ) |
| 6 | ಮರು ಮತದಾನ ಅವಶ್ಯಕವಿದ್ದಲ್ಲಿ ದಿನಾಂಕ ಮತ್ತು ದಿನ (ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ) | 29-04-2021 (ಗುರುವಾರ) |
| 7 | ಮತಗಳ ಎಣಿಕೆಯು ಬೆಳಿಗ್ಗೆ 8.00 ಘಂಟೆಯಿಂದ (ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ) | 30-04-2021 (ಶುಕ್ರವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 30-04-2021 (ಶುಕ್ರವಾರ) |

ಸದಾಚಾರ ಸಂಹಿತೆಯು ದಿನಾಂಕ:8-4-2021 ರಿಂದ ದಿನಾಂಕ:30-4-2021 ರವರೆಗೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ.

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪೌರನಿಗಮಗಳ (ಚುನಾವಣಾ) ನಿಯಮಗಳು, 1979ರ ನಿಯಮ 10ರಡಿಯಲ್ಲಿ ಮಹಾನಗರ ಪಾಲಿಕೆಗೆ ಸಂಬಂಧಿಸಿದ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ - 1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯಲ್ಲಿ ಚುನಾವಣೆ ನಡೆಯುವ ಮಹಾನಗರ ಪಾಲಿಕೆಯ ಹೆಸರು, ವಾರ್ಡಿನ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಛೇರಿ, ಸಂಬಂಧಪಟ್ಟ ಮಹಾನಗರ ಪಾಲಿಕೆ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಈ-ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಚುನಾವಣಾಧಿಕಾರಿಗಳು ಪ್ರಪತ್ರ – 1 ಎ ರಲ್ಲಿ ಚುನಾವಣಾ ನೋಟಿಸನ್ನು ಪ್ರಕಟಿಸುವಂತೆ ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**ವಿಶೇಷ ಸೂಚನೆ:**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. **ಘೋಷಣಾಪತ್ರ / ಪ್ರಮಾಣಪತ್ರ:** ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ ತನ್ನ ಹಿನ್ನೆಲೆ, ಚರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು, ತನ್ನ ಸ್ವವಿವರ, ವಿದ್ಯಾರ್ಹತೆ ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.
3. **ಸರ್ಕಾರದ ಅಧಿಸೂಚನೆ – II ಸಂಖ್ಯೆ: ಸಿಆಸುಇ 12 ಹೆಚ್‌ಹೆಚ್‌ಎಲ್ 2020 ದಿನಾಂಕ:21-11-2020 ರಂತೆ ದಿನಾಂಕ: 10-4-2021 ಎರಡನೇ ಶನಿವಾರವು ನೆಗೋಷಿಯೆಬಲ್ ಇನ್ಸ್ಟ್ರುಮೆಂಟ್ಸ್ ಆಕ್ಟ್ 1881ರ ಪ್ರಕಾರ ಸಾರ್ವತ್ರಿಕ ರಜಾ ದಿನ ಎಂದು ಅಧಿಸೂಚಿಸಲಾಗಿದ್ದು ಅಂದು ಚುನಾವಣಾಧಿಕಾರಿಗಳು ನಾಮಪತ್ರಗಳನ್ನು ಸ್ವೀಕರಿಸುವಂತಿಲ್ಲ.**
4. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: ಎಸ್‌ಇಸಿ 10 ಎಂಐಎಸ್‌ಸಿ 2016 ದಿನಾಂಕ:29-6-2016 ಹಾಗೂ ತಿದ್ದುಪಡಿ ದಿನಾಂಕ:6-7-2016ರಂತೆ ಕ್ರಮ ವಹಿಸುವುದು.
5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.

6. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2019, ಬೆಂಗಳೂರು ದಿನಾಂಕ: 27–4–2020 ರಂತೆ ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ 1976ರ ಪ್ರಕರಣ 14ಕ್ಕೆ ತಿದ್ದುಪಡಿ ಮಾಡಲಾಗಿದ್ದು "ಅರ್ಹ ಮತದಾರನು, ಚುನಾವಣೆಯಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳ ಪೈಕಿ ಯಾವೊಬ್ಬ ಅಭ್ಯರ್ಥಿಯ ಪರವಾಗಿ ತನ್ನ ಮತವನ್ನು ಚಲಾಯಿಸಲು ಇಚ್ಛಿಸದಿರುವ ಸಂದರ್ಭದಲ್ಲಿ ಆತನು "None of the above" (NOTA), (ಮೇಲಿನ ಯಾರೊಬ್ಬರಿಗೂ ಇಲ್ಲ) ಎಂದು ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ.
7. ರಾಜ್ಯ ಚುನಾವಣಾ ಆಯೋಗದ ಆದೇಶದ ಸಂಖ್ಯೆ: ರಾಚುಆ 28 ಇಯುಬಿ 2018, ದಿನಾಂಕ: 1–6–2018ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಚುನಾವಣಾ ಪ್ರಕ್ರಿಯೆಯು ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

(ನಾಗರಾಜು.ಎನ್.ಆರ್)
ಅಧೀನ ಕಾರ್ಯದರ್ಶಿ
29/03/2021

**ರವರಿಗೆ:**

1. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.
2. ಆಯುಕ್ತರು, ಬಳ್ಳಾರಿ ಮಹಾನಗರ ಪಾಲಿಕೆ, ಬಳ್ಳಾರಿ.